ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 21/5/2020

21 MAY 2020

# ಶಾಸಕ ಜಮೀರ್ ಹೇಳಿಕೆ ಸಂವಿಧಾನ ವಿರೋಧಿ

» **ಸಚಿವ ಸಿ.ಟಿ. ರವಿ ಆಕ್ರೋಶ**

ಬೆಂಗಳೂರು: ವಕ್ಫ್ ಬೋರ್ಡ್ ಹಣವನ್ನು ಸರ್ಕಾರ ತೆಗೆದುಕೊಳ್ಳಬಾರದು ಎಂಬ ಶಾಸಕ ಜಮೀರ್ ಹೇಳಿಕೆಗೆ ಸಚಿವ ಸಿ.ಟಿ. ರವಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇದು ಸಂವಿಧಾನ ವಿರೋಧಿ ಹೇಳಿಕೆ. ತಾರತಮ್ಯ ಮಾಡಲು ಸಂವಿಧಾನದಲ್ಲಿ ಅವಕಾಶ ವಿಲ್ಲ. ಮಾನವೀಯತೆಗೆ ವಿರುದ್ಧವಾಗಿ ಧರ್ಮ ಪ್ರತಿಬಿಂಬಿಸುವ ಹೇಳಿಕೆ ಕೊಟ್ಟಿದ್ದಾರೆ. ಇದು ಜಮೀರ್ ಹೇಳಿಕೆಯೊ?, ಕಾಂಗ್ರೆಸ್ ಹೇಳಿಕೆಯೊ? ಕಾಂಗ್ರೆಸ್‌ನ ಯಾರೂ ಇದರ ಬಗ್ಗೆ ಏಕೆ ಪ್ರತಿಕ್ರಿಯೆ ಕೊಡುತ್ತಿಲ್ಲ ಎಂದು ಪ್ರಶ್ನಿಸಿದ್ದಾರೆ.

ವಕ್ಫ್ ಬೋರ್ಡ್ ಸರ್ಕಾರಕ್ಕಿಂತ ದೊಡ್ಡದಲ್ಲ. ವಕ್ಫ್ ಬೋರ್ಡ್‌ಗೆ ಕೊಡುವುದು ಕೂಡ ಸಾರ್ವಜನಿಕರ ಹಣ. ಅವರು ಇನ್ನೂ ಜಿನ್ನಾ ಮಾನಸಿಕತೆಯಿಂದ ಹೊರಬಂದಿಲ್ಲ ಎಂದು ಟೀಕಿಸಿದ್ದಾರೆ. ವಕ್ಫ್ ಹಣವನ್ನು ಹೇಗೆ ಖರ್ಚು ಮಾಡಬೇಕು ಎಂದು ಹೇಳುವ ಅಧಿಕಾರ ಜಮೀರ್‌ಗೆ ಇಲ್ಲ. ಅವರ ಜಾತ್ಯತೀತತೆಯ ಮಾತು ಕೇವಲ ನಾಟಕೀಯ ಎಂದು ರವಿ ಆರೋಪಿಸಿದ್ದಾರೆ.